ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಕಂದಾಯ ನಿವೇಶನಗಳ ನೋಂದಣಿ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) -

34 (324) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಭೂಪರಿವರ್ತನೆಯಾಗದ ಕೃಷಿ ಜಮೀನುಗಳನ್ನು ನಿವೇಶನಗಳಾಗಿ ಪರಿವರ್ತಿಸಿ ಸಾರ್ವಜನಿಕರು ಸ್ಥಿರಾಸ್ತಿಗಳ ನೋಂದಣಿ ಮಾಡಿಕೊಳ್ಳುತ್ತಿರುವುದು ನಿಜವೇ ;

(ಆ) ಪ್ರಸ್ತುತ ಕಂದಾಯ ನಿವೇಶನಗಳ ನೋಂದಣಿಯು ಸ್ಥಗಿತಗೊಂಡಿರುವುದು ನಿಜವೇ ; (ಮಾಹಿತಿ ಒದಗಿಸುವುದು)

(ಇ) ಕೈ ಬರಹದ ಹಿಂದಿನ ಖಾತಾಗಳನ್ನು ಪಡೆದು ಕಂದಾಯ ನಿವೇಶನಗಳ ನೋಂದಣಿಯು ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಮುಂದುವರೆದಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ನಿಯಮ ಉಲ್ಲಂಘಿಸಿ ನೋಂದಣಿ ಮಾಡಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? (ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ಒದಗಿಸುವುದು)